ರವೀಂದ್ರ ಜಡೇಜ ಹೀಗೆ ಹಲವಾರು ಕ್ರಿಕೆಟಿಗರು ತಮ್ಮ ಪ್ರತಿಭೆಯಿಂದಲೇ ಮೇಲೆ ಬಂದವರು. ಅವರಿಗೆ ಐಪಿಎಲ್ ದೊಡ್ಡ ಅವಕಾಶ ಕೊಟ್ಟಿದೆ. ಬದುಕು ರೂಪಿಸಿದೆ.

ಹದಿನಾಲ್ಕು ವರ್ಷಗಳ ಅವಧಿಯಲ್ಲಿ 'ಐಪಿಎಲ್'ನ ವಿವಿಧ ಆವೃತ್ತಿಗಳಲ್ಲಿ ಆಡಿದ ಅನೇಕ ಆಟಗಾರರು ರಾಷ್ಟ್ರೀಯ ತಂಡದಲ್ಲಿ ಅವಕಾಶ ಪಡೆದಿದ್ದಾರೆ. ಐಪಿಎಲ್ ವೇದಿಕೆಯ ಮೂಲಕ ಹೆಸರು, ಕೀರ್ತಿ ಸಂಪಾದಿಸಿದ್ದಾರೆ. ಈಗ ಹಳಬರ ಅರ್ಭಟದೊಂದಿಗೆ, ಹೊಸಬರ ಅಬ್ಬರಕ್ಕೆ ಹೊಸ ಅವಕಾಶವಾಗಿ 'ಐಪಿಎಲ್' ಮತ್ತು 'ಟ್ವೆಂಟಿ–20' ವಿಶ್ವಕಪ್ ಕ್ರಿಕೆಟ್ ವೇದಿಕೆಯಾಗಿ ಒದಗಿಬಂದಿವೆ.

## ವಿಶ್ವಕಪ್: ಭಾರತ ನೆಚ್ಚಿನ ತಂಡ

ಚುಟುಕು ಕ್ರಿಕೆಟ್‌ನಲ್ಲಿ ಅಪಾರ ಅನುಭವ ಹೊಂದಿರುವ ಮತ್ತು ಐಸಿಸಿ ಟ್ವೆಂಟಿ–20 ರ‍್ಯಾಂಕಿಂಗ್‌ನಲ್ಲಿ ಅಗ್ರಸ್ಥಾನದಲ್ಲಿರುವ ಭಾರತ ತಂಡ ವಿಶ್ವಕಪ್ ಗೆಲ್ಲುವ ನೆಚ್ಚಿನ ತಂಡವೆನಿಸಿದೆ.

ವಿರಾಟ್ ಕೊಹ್ಲಿ ನಾಯಕತ್ವದ ಭಾರತ ತಂಡದಲ್ಲಿ ರೋಹಿತ್ ಶರ್ಮಾ (ಉಪನಾಯಕ), ಕೆ.ಎಲ್. ರಾಹುಲ್, ಸೂರ್ಯಕುಮಾರ್ ಯಾದವ್, ರಿಷಭ್ ಪಂತ್ (ವಿಕೆಟ್‌ಕೀಪರ್), ಇಶಾನ್ ಕಿಶನ್ (ವಿಕೆಟ್‌ಕೀಪರ್), ಹಾರ್ದಿಕ್ ಪಾಂಡ್ಯ, ರವೀಂದ್ರ ಜಡೇಜ, ರಾಹುಲ್ ಚಾಹರ್, ರವಿಚಂದ್ರನ್ ಅಶ್ವಿನ್, ಅಕ್ಷರ್ ಪಟೇಲ್, ವರುಣ್ ಚಕ್ರವರ್ತಿ, ಜಸ್‌ಪ್ರೀತ್ ಬೂಮ್ರಾ, ಭುವನೇಶ್ವರ ಕುಮಾರ್, ಮೊಹಮ್ಮದ್ ಶಮಿ ಇದ್ದಾರೆ.

ಶ್ರೇಯಸ್ ಅಯ್ಯರ್, ಶಾರ್ದೂಲ್ ಠಾಕೂರ್ ಹಾಗೂ ದೀಪಕ್ ಚಾಹರ್ ಕಾಯ್ದಿರಿಸಿದ ಆಟಗಾರರಾಗಿದ್ದಾರೆ. ಇವರೆಲ್ಲರೂ ಐಪಿಎಲ್‌ನಲ್ಲಿ ಆಡಿದ ಅನುಭವ ಹೊಂದಿದ್ದಾರೆ. ಹೀಗಾಗಿ




ಕ್ರಿಕೆಟ್ ಕ್ರೇಜ್‌ಗೆ ಉದಾಹರಣೆ
ಅಭಿಮಾನಿಯೊಬ್ಬರ ಈ 'ಧೋನಿ ಮನೆ'



## ಐಪಿಎಲ್ ಸ್ಟಾರ್

### ವರುಣ್ ಚಕ್ರವರ್ತಿ

ಐಪಿಎಲ್‌ನಲ್ಲಿ ತೋರಿದ ಪ್ರದರ್ಶನದಿಂದಾಗಿ ವಿಶ್ವಕಪ್ ತಂಡದಲ್ಲಿ ಸ್ಥಾನ ಗಳಿಸಿರುವ ವರುಣ್ ಚಕ್ರವರ್ತಿ ಮೂಲತಃ ಬೀದರ್‌ನವರು. ಕ್ರಿಕೆಟ್ ಬದುಕು ರೂಪಿಸಿಕೊಂಡಿದ್ದು ತಮಿಳುನಾಡಿನಲ್ಲಿ.

2018–19ರ ವಿಜಯ್ ಹಜಾರೆ ಟೂರ್ನಿಯಲ್ಲಿ ಒಟ್ಟು ಹೆಚ್ಚು ವಿಕೆಟ್ ಪಡೆದವರ (22) ಪಟ್ಟಿಯಲ್ಲಿ ಮೊದಲ ಸ್ಥಾನ ಗಳಿಸಿದ್ದರು. ಅದೇ ವರ್ಷ ರಣಜಿ ಟೂರ್ನಿಯಲ್ಲಿ ಅವಕಾಶ ಪಡೆದರು. ಇದರಿಂದಾಗಿ 2019ರ ಐಪಿಎಲ್ ಟೂರ್ನಿಗೆ 8.4 ಕೋಟಿ ಮೊತ್ತಕ್ಕೆ ಕಿಂಗ್ಸ್ ಇಲೆವೆನ್ ಪಂಜಾಬ್ ತಂಡಕ್ಕೆ ಆಯ್ಕೆಯಾದರು. ಮುಂದಿನ ಆವೃತ್ತಿಯ ಟೂರ್ನಿಗೆ ಕೋಲ್ಕತ್ತ ನೈಟ್ ರೈಡರ್ಸ್ ತಂಡಕ್ಕೆ ಸೇರಿಕೊಂಡು ಒಂದೇ ಪಂದ್ಯದಲ್ಲಿ ಐದು ವಿಕೆಟ್‌ಗಳನ್ನು ಕಬಳಿಸಿದರು. ಮರುವರ್ಷವೇ ಆಸ್ಟ್ರೇಲಿಯಾ ವಿರುದ್ಧದ ಟ್ವೆಂಟಿ–20 ಸರಣಿಗೆ ಭಾರತ ತಂಡದಲ್ಲಿ ಅವಕಾಶ ಲಭಿಸಿತು. ಆದರೆ, ಗಾಯದ ಕಾರಣದಿಂದಾಗಿ ಟೂರ್ನಿಯಿಂದ ಹೊರಗುಳಿಯಬೇಕಾಯಿತು. ಇದೇ ವರ್ಷ ಇಂಗ್ಲೆಂಡ್ ವಿರುದ್ಧದ ಸರಣಿಗೆ ಆಯ್ಕೆಯಾದರು. ಶ್ರೀಲಂಕಾ ಎದುರಿನ ಸರಣಿಗೂ ಅವಕಾಶ ಪಡೆದರು. ಹಂತಹಂತವಾಗಿ ಉತ್ತಮ ಪ್ರದರ್ಶನ ನೀಡಿದ್ದರಿಂದ ಅವರಿಗೆ ಈಗ ಪ್ರತಿಷ್ಠಿತ ವಿಶ್ವಕಪ್‌ನಲ್ಲಿ ಅವಕಾಶ ಸಿಕ್ಕಿದೆ.